**ಕರ್ನಾಟಕ ಸರ್ಕಾರ**

**<u>ಕಾಲೇಜು ಶಿಕ್ಷಣ ಇಲಾಖೆ</u>**

ಸಂ: ಡಿಸಿಇ/ಟಿಆರ್‌ಎನ್/24/2023-ಟಿಡಿಜಿ ಕಾಲೇಜು ಮತ್ತು ತಾಂತ್ರಿಕ ಶಿಕ್ಷಣ ಆಯುಕ್ತರ ಕಛೇರಿ,
ಬೆಂಗಳೂರು. ದಿನಾಂಕ:06.07.2023.

# ಸುತ್ತೋಲೆ

ವಿಷಯ: ಕಾಲೇಜು ಶಿಕ್ಷಣ ಇಲಾಖೆಯ ಬೋಧಕರ ಸಾರ್ವಜನಿಕ ಹಿತಾಸಕ್ತಿಯ ವರ್ಗಾವಣೆಗೆ ಒಳಪಡುವ ಬೋಧಕರ ಪಟ್ಟಿಯನ್ನು ಪ್ರಕಟಿಸುವ ಬಗ್ಗೆ.

ಉಲ್ಲೇಖ:
1. ಸರ್ಕಾರದ ಅಧಿಸೂಚನೆ ಸಂಖ್ಯೆ:ಇಡಿ 151 ಡಿಸಿಇ 2020 ದಿನಾಂಕ:29.01.2021 ರಂತೆ ಅಧಿಸೂಚಿಸಲಾದ ಕಾಲೇಜು ಶಿಕ್ಷಣ ಇಲಾಖೆಯ ಬೋಧಕರ ವರ್ಗಾವಣೆ ನಿಯಮಗಳು-2021.
2. ಸರ್ಕಾರದ ತಿದ್ದುಪಡಿ ಅಧಿಸೂಚನೆ ಸಂಖ್ಯೆ:ಇಡಿ 151 ಡಿಸಿಇ 2020 ದಿನಾಂಕ:29.06.2021.
3. ಕರ್ನಾಟಕ ರಾಜ್ಯ ಉಚ್ಚನ್ಯಾಯಾಲಯವು ರಿಟ್ ಅರ್ಜಿ ಸಂಖ್ಯೆ: 23378/2021ಕ್ಕೆ ದಿನಾಂಕ:17-01-2022ರಂದು ನೀಡಿರುವ ಮಧ್ಯಂತರ ಆದೇಶ.

** ** **

ಕಾಲೇಜು ಶಿಕ್ಷಣ ಇಲಾಖೆಯಲ್ಲಿ ಕರ್ತವ್ಯನಿರ್ವಹಿಸುತ್ತಿರುವ ಬೋಧಕರ (ಪ್ರಾಧ್ಯಾಪಕರು, ಸಹ/ ಸಹಾಯಕ ಪ್ರಾಧ್ಯಾಪಕರು, ಗ್ರಂಥಪಾಲಕರು ಮತ್ತು ಕ್ರೀಡಾ & ದೈಹಿಕ ಶಿಕ್ಷಣ ನಿರ್ದೇಶಕರು) ವರ್ಗಾವಣೆಗಳನ್ನು ನಿಯಂತ್ರಿಸುವ ಸಲುವಾಗಿ ಉಲ್ಲೇಖಿತ ಸರ್ಕಾರದ ಅಧಿಸೂಚನೆಯಲ್ಲಿ ಕರ್ನಾಟಕ ರಾಜ್ಯ ನಾಗರೀಕ ಸೇವೆಗಳು (ಕಾಲೇಜು ಶಿಕ್ಷಣ ಇಲಾಖೆಯ ಬೋಧಕರ ವರ್ಗಾವಣೆ ನಿಯಂತ್ರಣ) ನಿಯಮಗಳು-2021 ಅನ್ನು ರೂಪಿಸಿ ಅಧಿಸೂಚಿಸಲಾಗಿರುತ್ತದೆ.

ಸದರಿ ವರ್ಗಾವಣೆ ನಿಯಮಗಳ ನಿಯಮ 8 ರಲ್ಲಿ ಸಾರ್ವಜನಿಕ ಹಿತದೃಷ್ಟಿಯ ಕಡ್ಡಾಯ ವರ್ಗಾವಣೆ ಹಾಗೂ ವಿಶೇಷ ಪ್ರಕರಣಗಳ ಕೋರಿಕೆ ವರ್ಗಾವಣೆಗಳನ್ನು ಪ್ರತಿ ಕ್ಯಾಲೆಂಡರ್ ವರ್ಷದ ಮೇ ಮತ್ತು ಜುಲೈ ಮಾಹೆಯ ನಡುವೆ ಕೈಗೊಳ್ಳಲು ಅವಕಾಶ ಕಲ್ಪಿಸಲಾಗಿರುತ್ತದೆ.

ವರ್ಗಾವಣೆ ನಿಯಮಗಳ ನಿಯಮ 5ರಲ್ಲಿ ತಿಳಿಸಿರುವಂತೆ ನಿಗದಿತ ಸೇವಾವಧಿಯನ್ನು ಪೂರೈಸಿ ಮಂಜೂರಾದ ಬೋಧಕರ ಹುದ್ದೆಗಳ ಶೇಕಡಾ 9 ರ ಮಿತಿಗೊಳಪಟ್ಟು EMIS ತಂತ್ರಾಂಶದಲ್ಲಿ ದಾಖಲಿತ ಮಾಹಿತಿಯನ್ವಯ ಸಿದ್ದಪಡಿಸಲಾದ **ಸಾರ್ವಜನಿಕ ಹಿತಾಸಕ್ತಿಯ ವರ್ಗಾವಣೆಗೆ ಒಳಪಡಲಿರುವ ಬೋಧಕರ (ಪ್ರಾಧ್ಯಾಪಕರು, ಸಹ/ ಸಹಾಯಕ ಪ್ರಾಧ್ಯಾಪಕರು, ಗ್ರಂಥಪಾಲಕರು ಮತ್ತು ಕ್ರೀಡಾ & ದೈಹಿಕ ಶಿಕ್ಷಣ ನಿರ್ದೇಶಕರು) ಪಟ್ಟಿಯನ್ನು ಕೆಳಕಂಡಂತೆ ಅನುಬಂಧದಲ್ಲಿ ನೀಡಲಾಗಿದೆ.**

1) **ಅನುಬಂಧ-01: ಉಳಿಕೆ ಮೂಲ ವೃಂದದ ವಲಯ ಮತ್ತು ವರ್ಗವಾರು ಪಟ್ಟಿ.**
2) **ಅನುಬಂಧ-02: ಕಲ್ಯಾಣ-ಕರ್ನಾಟಕ ಸ್ಥಳೀಯ ವೃಂದದ ವಲಯ ಮತ್ತು ವರ್ಗವಾರು ಪಟ್ಟಿ**

--2

ಕಾಲೇಜು ಶಿಕ್ಷಣ ಇಲಾಖೆಯ ಬೋಧಕರ ವರ್ಗಾವಣೆ ನಿಯಮಗಳು-2021 ರ ನಿಯಮ 3 ರ ಪರಂತುವಿನಲ್ಲಿ ಕಲ್ಪಿಸಿರುವ ಅವಕಾಶಗಳಂತೆ ಈ ನಿಯಮಗಳನ್ವಯ ಹುದ್ದೆ ಸಹಿತ ಸ್ಥಳಾಂತರಗೊಂಡಿರುವ ಬೋಧಕರು ಸ್ಥಳಾಂತರ ಪೂರ್ವದಲ್ಲಿ ಕರ್ತವ್ಯನಿರ್ವಹಿಸಿದ್ದ ಕಾಲೇಜು ಮತ್ತು ವಲಯದಲ್ಲಿ ಸಲ್ಲಿಸಿದ್ದ ಸೇವೆಯನ್ನು ಪರಿಗಣಿಸಿ ಪಟ್ಟಿಯನ್ನು ಸಿದ್ಧಪಡಿಸಲಾಗಿದೆ.

**ಜುಲೈ-2023ರ ಮಾಹೆಯಲ್ಲಿ ವಯೋನಿವೃತ್ತಿ ಹೊಂದುವ ಬೋಧಕರನ್ನು ಹೊರತುಪಡಿಸಿ ಪಟ್ಟಿಯನ್ನು ತಯಾರಿಸಿದ್ದು, ಸದರಿ ಪಟ್ಟಿಯಲ್ಲಿ ವ್ಯತ್ಯಾಸಗಳಿದ್ದಲ್ಲಿ ಪೂರಕ ದಾಖಲೆಗಳೊಂದಿಗೆ ಮನವಿಯನ್ನು dce.teachingtransfers2023@gmail.com ವಿಳಾಸಕ್ಕೆ ದಿ:12-07-2023 ರ ಒಳಗಾಗಿ ಇಮೇಲ್ ಮೂಲಕ ಸಲ್ಲಿಸುವಂತೆ ಸೂಚಿಸಿದೆ. ಭೌತಿಕವಾಗಿ ಸಲ್ಲಿಸುವ ಮತ್ತು ಕೊನೆಯ ದಿನಾಂಕದ ನಂತರ ಸಲ್ಲಿಸುವ ಹಾಗೂ ಅಪೂರ್ಣ ಮಾಹಿತಿಯನ್ನು ಪರಿಗಣಿಸಲಾಗುವುದಿಲ್ಲ.**

**ಆಯುಕ್ತರು**

**ಕಾಲೇಜು ಮತ್ತು ತಾಂತ್ರಿಕ ಶಿಕ್ಷಣ**

**ಪ್ರತಿಯನ್ನು:**

1. ಎಲ್ಲಾ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳ ಪ್ರಾಂಶುಪಾಲರು ಹಾಗೂ ಬೋಧಕರುಗಳಿಗೆ - ಮಾಹಿತಿ ಹಾಗೂ ಅಗತ್ಯ ಕ್ರಮಕ್ಕಾಗಿ.
2. ಜಂಟಿ ನಿರ್ದೇಶಕರು, ಕಾಲೇಜು ಶಿಕ್ಷಣ ಪ್ರಾದೇಶಿಕ ಕಛೇರಿ, ಬೆಂಗಳೂರು, ಮೈಸೂರು, ಶಿವಮೊಗ್ಗ, ಮಂಗಳೂರು, ಧಾರವಾಡ ಹಾಗೂ ಕಲಬುರಗಿ-ಮಾಹಿತಿಗಾಗಿ.
3. ಮಾಹಿತಿ ಅಧಿಕಾರಿಗಳು, ಕೇಂದ್ರ ಕಛೇರಿ, ಬೆಂಗಳೂರು-ಇಲಾಖಾ ವೆಬ್‌ಸೈಟ್‌ನಲ್ಲಿ ಪ್ರಕಟಿಸಲು ಸೂಚಿಸಲಾಗಿದೆ.
4. ರಕ್ಷಾ ಕಡತ.
5. ಕಛೇರಿ ಪ್ರತಿ.